ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ
ಶ್ರೀರಂಗಪಟ್ಟಣ

ಸಿ.ಸಿ.385/2018

| | |
|---|---|
| ಸಿ.ಡಬ್ಲ್ಯೂ : | 1 |
| ಪಿ.ಡಬ್ಲ್ಯೂ : | 3 |

| | | |
|---|---|---|
| ಸಾಕ್ಷಿದಾರರ ಹೆಸರು | : | ಕೃಷ್ಣ ಕೆ.ಜಿ |
| ತಂದೆ/ ಪತಿಯ ಹೆಸರು | : | ಗೂಳಿಗೌಡ |
| ವಯಸ್ಸು | : | 54 ವರ್ಷ |
| ವೃತ್ತಿ | : | ವ್ಯವಸಾಯ ಮತ್ತು ವ್ಯಾಪಾರ |
| ವಾಸ | : | ಹುಲಿಯೂರು ದುರ್ಗಾ |

**ಸಾಕ್ಷಿಗೆ ಪ್ರಮಾಣ ವಚನ ಮಾಡಿಸಿದ ದಿನಾಂಕಃ 15.07.2025**

**ಮುಖ್ಯ ವಿಚಾರಣೆಃ ಮಾನ್ಯ ಎ ಪಿ ಪಿ ರವರಿಂದ**

ನನಗೆ 1 ಮತ್ತು 2 ನೇ ಆರೋಪಿತರು ಪರಿಚಯ ಇರುತ್ತದೆ. ಮೊಗರಹಳ್ಳಿ ಗ್ರಾಮದ ಸರ್ವೆ ನಂ.56 ರಲ್ಲಿ 3 ಎಕರೆ 10 ಗುಂಟೆ ಜಮೀನನ್ನು ಆರೋಪಿತರು ನನಗೆ ಮಾರಾಟ ಮಾಡಿದ್ದು ಸದರಿ ಜಮೀನಿಗೆ ನಾನೇ ಹಕ್ಕುದಾರನಾಗಿರುತ್ತೇನೆ. ಆರೋಪಿತರು ವಂಶವೃಕ್ಷ ನೀಡಿರುವ ಬಗ್ಗೆ ನನಗೆ ಅಷ್ಟಾಗಿ ಗೊತ್ತಿರುವುದಿಲ್ಲ . ನನಗೆ ಈ ಪ್ರಕರಣದ ಬಗ್ಗೆ ಉಳಿದ ಮಾಹಿತಿ ಇರುವುದಿಲ್ಲ. ಪ್ರಸ್ತುತ ನಾನು ಹಾಗೂ ಆರೋಪಿತರು ರಾಜಿ ಆಗಿದ್ದು, ಸಿವಿಲ್ ದಾವೆಯೂ ಸಹಾ ರಾಜಿಯಾಗಿದ್ದು ಈ ಪ್ರಕರಣವನ್ನು ಮುಕ್ತಾಯಗೊಳಿಸಬೇಕೆಂದು ಪ್ರಾರ್ಥಿಸುತ್ತೇನೆ.

(ಈ ಹಂತದಲ್ಲಿ ಮಾನ್ಯ ಸ.ಸ.ಅ. ಅವರು ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡುವಂತೆ ಕೋರಿಕೊಂಡಿದ್ದು, ಆಲಿಸಿ ಅನುಮತಿ ನೀಡಲಾಯಿತು)

<u>ಪಾಟಿ ಸವಾಲುಃ ಮಾನ್ಯ ಸ.ಸ.ಅ ರವರಿಂದ</u>

ನಾನು ಈ ನ್ಯಾಯಾಲಯದಲ್ಲಿ ಖಾಸಗಿ ಪಿರ್ಯಾದನ್ನು ದಾಖಲಿಸಿದ್ದು ಅದರಂತೆ ಈ ಪ್ರಕರಣ ದಾಖಲಾಗಿರುತ್ತದೆ ಎಂದರೆ ಸರಿ. ದೂರಿನಲ್ಲಿ ಬರೆದಿರುವ ವಿಚಾರಗಳನ್ನು ನಾನೇ ಬರೆಸಿದ್ದು ಈಗ ನನಗೆ ಏನು ಗೊತ್ತಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಈ ಘಟನೆ ನಡೆದಿದ್ದರೂ ಸಹಾ ಗೊತ್ತಿಲ್ಲ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀಸವಾಲು ಃ ಆರೋಪಿತರ ಪರ ವಕೀಲರಿಂದ</u>

ಆರೋಪಿ ಪರ ವಕೀಲರು ಪಾಟೀಸವಾಲು ಇಲ್ಲಎಂದು ತಿಳಿಸಿದ್ದರಿಂದ ಪಾಟೀಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರು ವಿಚಾರಣೆ ಇಲ್ಲ.

ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಸಾ.ಓ.ಹೇ.ಸ.ಒ

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆಎಂಎಫ್‌ಸಿ., ಶ್ರೀರಂಗಪಟ್ಟಣ.